# ಕರ್ನಾಟಕ ಸರ್ಕಾರ

ನಂ.ಗ್ರಾಅಪ/09/ಗ್ರಾಪಂಅ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:16-04-2016

## ಸುತ್ತೋಲೆ-3

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಾಪಿಸುವ ಕೈಗಾರಿಕೆಗಳಿಗೆ ಗ್ರಾಮ ಪಂಚಾಯತಿಗಳಿಂದ "ಅನುಮತಿ" ಪಡೆಯಲು ಹಾಗೂ **ಟ್ರೇಡ್ ಲೈಸೆನ್ಸ್ ಮತ್ತು ನವೀಕರಣ ಲೈಸೆನ್ಸ್ ಫೀಜುಗಳನ್ನು ವಸೂಲಿ ಮಾಡದಿರುವ** ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾಪಂಅ 2015 ದಿನಾಂಕ: 24-02-2016.

****

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಾಪಿಸುವ ಕೈಗಾರಿಕೆಗಳಿಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 66 ರಡಿ ಕೈಗಾರಿಕೆಗಳನ್ನು ಸ್ಥಾಪಿಸಲು ಗ್ರಾಮ ಪಂಚಾಯತಿಗಳಿಂದ "ಅನುಮತಿ" ಮಾತ್ರ ಅಗತ್ಯವಿದೆ. **ಆದರೆ ಟ್ರೇಡ್ ಲೈಸೆನ್ಸ್ ನೀಡಲು ಗ್ರಾಮ ಪಂಚಾಯತಿಗಳಿಗೆ ಯಾವುದೇ ಅಧಿಕಾರವಿರುವುದಿಲ್ಲ.** ಗ್ರಾಮ ಪಂಚಾಯತಿಗಳು ಅವುಗಳ ವ್ಯಾಪ್ತಿಯ ಕೈಗಾರಿಕೆಗಳ ಮಾಲೀಕರಿಂದ ಲೈಸೆನ್ಸ್ ಹಾಗೂ ಲೈಸೆನ್ಸ್ ನವೀಕರಣ ಬಾಬ್ತಿಗಾಗಿ ಕೈಗಾರಿಕೆಗಳ ಮೇಲೆ ನಿಯಮಬಾಹಿರವಾಗಿ ಗರಿಷ್ಠ ಮೊತ್ತವನ್ನು ನಿಗದಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 66 ರಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗ್ರಾಮ ಪಂಚಾಯತಿಗಳಿಂದ ಅನುಮತಿಯನ್ನು ಮಾತ್ರ ನೀಡಬೇಕಾಗಿರುತ್ತದೆ. **ಪ್ರಸ್ತುತ ಗ್ರಾಮ ಪಂಚಾಯತಿಗಳು ಟ್ರೇಡ್ ಲೈಸೆನ್ಸ್ ಮತ್ತು ನವೀಕರಣ ಲೈಸೆನ್ಸ್ ಫೀಜುಗಳನ್ನು ತತ್‌ಕ್ಷಣದಿಂದ ವಸೂಲಿ ಮಾಡದಿರುವಂತೆ ತಿಳಿಸಿದೆ. ಮುಂದುವರೆದು, ಕೈಗಾರಿಕೆಗಳಿಗೆ ಅಭಿವೃದ್ಧಿ ಶುಲ್ಕ ವಿಧಿಸಲು ಗ್ರಾಮ ಪಂಚಾಯತಿಗಳಿಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರಲ್ಲಿ ಅವಕಾಶ ಕಲ್ಪಿಸಿರುವುದಿಲ್ಲವಾದ್ದರಿಂದ ಗ್ರಾಮ ಪಂಚಾಯತಿಗಳು ಕೈಗಾರಿಕೆಗಳಿಗೆ ಅಭಿವೃದ್ಧಿ ಶುಲ್ಕ ವಿಧಿಸದಂತೆ ಸೂಚಿಸಿದೆ.**

ಮೇಲ್ಕಂಡಂತೆ ವಿವರಿಸಿರುವಂತೆ ಗ್ರಾಮ ಪಂಚಾಯತಿಗಳು ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ತಿಳಿಸಿದೆ.

4/5/16

**(ಕೆ. ಯಾಲಕ್ಕಿಗೌಡ)**
ನಿರ್ದೇಶಕರು (ಪಂ.ರಾಜ್) ಹಾಗೂ
**ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,**
**ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.**

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.